# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1569 |
| ಸದಸ್ಯರ ಹೆಸರು : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ : | 19.12.2025 |
| ಉತ್ತರಿಸುವ ಸಚಿವರು : | ಹಿಂದುಳಿದ ವರ್ಗಗಳ ಕಲ್ಯಾಣ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಸತಿ ನಿಲಯಗಳಲ್ಲಿ ಲಭ್ಯವಿರುವ ಸೀಟುಗಳ ಸಂಖ್ಯೆಯೆಷ್ಟು; ವಾರ್ಷಿಕವಾಗಿ ಅರ್ಜಿ ಸಲ್ಲಿಸಿದವರ ಪೈಕಿ ಎಷ್ಟು ಸಂಖ್ಯೆಯ ವಿದ್ಯಾರ್ಥಿಗಳಿಗೆ ಸೀಟುಗಳ ಕೊರತೆಯುಂಟಾಗುತ್ತಿದೆ; ಈ ಕುರಿತು ಇಲಾಖೆಯ ಕ್ರಮಗಳೇನು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಒಟ್ಟು 2659 ವಿದ್ಯಾರ್ಥಿನಿಲಯಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳಲ್ಲಿ ಒಟ್ಟು 2,50,641 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿದೆ. 2025-26ನೇ ಶೈಕ್ಷಣಿಕ ಸಾಲಿನಲ್ಲಿ 1,34,817 ನವೀಕರಣ ವಿದ್ಯಾರ್ಥಿಗಳಿದ್ದು, 1,15,824 ಖಾಲಿ ಸ್ಥಾನಗಳಿಗನುಗುಣವಾಗಿ ಒಟ್ಟು 2,41,682 ಅರ್ಜಿಗಳು ಸ್ವೀಕೃತವಾಗಿದ್ದು, ಇದರಲ್ಲಿ 93,538 ವಿದ್ಯಾರ್ಥಿಗಳಿಗೆ ಪ್ರವೇಶವಾಕಾಶವನ್ನು ಕಲ್ಪಿಸಿದ್ದು, ಉಳಿಕೆ 1,48,518 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲು ಸಾಧ್ಯವಾಗಿರುವುದಿಲ್ಲ.<br><br>ಮುಂದುವರೆದು, ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿ ದೊರಕದ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಅನುದಾನದ ಲಭ್ಯತೆಯನುಸಾರ ಮಾಸಿಕ ರೂ.1500/-ರಂತೆ 10 ತಿಂಗಳ ಅವಧಿಗೆ ರೂ.15000/-ಗಳನ್ನು ಮಂಜೂರು ಮಾಡಲಾಗುತ್ತದೆ. |
| ಆ) | ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ವಸತಿ ನಿಲಯಗಳಲ್ಲಿ ದೈನಂದಿನ ಸ್ವಚ್ಛತೆ ನಿರ್ವಹಣೆಗಾಗಿ ಅನುಸರಿಸಲಾಗುತ್ತಿರುವ ಮಾನದಂಡಗಳೇನು; ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ವಸತಿ ನಿಲಯಗಳಲ್ಲಿ ಶೌಚಾಲಯಗಳ ನಿರ್ವಹಣೆ ಯಾರ ಜವಾಬ್ದಾರಿಯಾಗಿದೆ; ಇದಕ್ಕಾಗಿ ಸಿಬ್ಬಂದಿಗಳನ್ನು ನೇಮಿಸಲಾಗಿದೆಯೇ; ಸ್ವಚ್ಛತೆಗಾಗಿ ಕಾಯ್ದಿರಿಸಲಾಗಿರುವ ಮಾಸಿಕ ಅನುದಾನವೆಷ್ಟು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿರುವ ವಿದ್ಯಾರ್ಥಿನಿಲಯಗಳಲ್ಲಿ ಸರ್ಕಾರದಿಂದ ಸ್ವಚ್ಛತೆಗಾಗಿ ನಿಗಧಿಪಡಿಸಿರುವ ಅನುದಾನದಂತೆ ಸ್ವಚ್ಛತಾ ಸಾಮಗ್ರಿಗಳನ್ನು ಖರೀದಿಸಿ, ನಿರ್ವಹಣೆಯನ್ನು ಮಾಡಲಾಗುತ್ತಿರುತ್ತದೆ.<br><br>ಅದರಂತೆ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆಗೆ ನಿಗಧಿಪಡಿಸಿರುವ ಅನುದಾನದಲ್ಲಿ ಗುತ್ತಿಗೆ ಆಧಾರದಲ್ಲಿ ಸಿಬ್ಬಂದಿಯನ್ನು ನಿಯೋಜಿಸಿಕೊಂಡು ಶೌಚಾಲಯಗಳ ಸ್ವಚ್ಛತೆಯನ್ನು ಮಾಡಿಸಲಾಗುತ್ತಿದೆ. |

<table>
<tr>
<td></td>
<td></td>
<td>ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಶೌಚಾಲಯಗಳ / ಆವರಣದ ಸ್ವಚ್ಛತೆಗೆ ಪ್ರತಿ ವಿದ್ಯಾರ್ಥಿ ನಿಲಯಕ್ಕೆ ಮಾಸಿಕವಾಗಿ ವೆಚ್ಚ ಮಾಡಲು ನಿಗಧಿಪಡಿಸಿರುವ ವೆಚ್ಚದ ವಿವರಗಳು ಈ ಕೆಳಕಂಡಂತಿದೆ.<br>
<table>
<tr><td>50 ಸಂಖ್ಯಾಬಲದ ವರೆಗೆ</td><td>ರೂ.1,000/-</td></tr>
<tr><td>51 ರಿಂದ 100 ಸಂಖ್ಯಾಬಲದ ವರೆಗೆ</td><td>ರೂ.1,250/-</td></tr>
<tr><td>101 ರಿಂದ 150 ರವರೆಗೆ</td><td>ರೂ.1,500/-</td></tr>
<tr><td>151 ಕ್ಕೂ ಮೇಲ್ಪಟ್ಟು</td><td>ರೂ.2,000/-</td></tr>
<tr><td>ಸೆಪ್ಟಿಕ್ ಟ್ಯಾಂಕ್ ಸ್ವಚ್ಛಗೊಳಿಸಲು (ವಾರ್ಷಿಕ)</td><td>ರೂ.5,000/-</td></tr>
</table>
ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಸ್ವಚ್ಛತಾ ಸಾಮಗ್ರಿಗಳ ಖರೀದಿಗೆ ನಿಗಧಿಪಡಿಸಿರುವ ಮಾಸಿಕ ವೆಚ್ಚದ ವಿವರಗಳು ಈ ಕೆಳಕಂಡಂತಿದೆ.<br>
<table>
<tr><td>50 ಸಂಖ್ಯಾಬಲದ ವರೆಗೆ</td><td>ರೂ.500/</td></tr>
<tr><td>51 ರಿಂದ 100 ಸಂಖ್ಯಾಬಲದ ವರೆಗೆ</td><td>ರೂ.750/</td></tr>
<tr><td>101 ರಿಂದ 150 ರವರೆಗೆ</td><td>ರೂ.1,000/</td></tr>
<tr><td>151 ಕ್ಕೂ ಮೇಲ್ಪಟ್ಟು</td><td>ರೂ.1,250/</td></tr>
</table>
</td>
</tr>
<tr>
<td>ಇ)</td>
<td>ಪ್ರಸ್ತುತ ಶೌಚಾಲಯ ಸ್ವಚ್ಛತೆಗಾಗಿ ನಿಗದಿಪಡಿಸಿರುವ ಅನುದಾನದ ಮೊತ್ತವು ಅತ್ಯಂತ ಕಡಿಮೆಯಿದ್ದು, ಇದನ್ನು ಯಾವಾಗ ಹಾಗೂ ಎಷ್ಟು ಪ್ರಮಾಣದಲ್ಲಿ ಪರಿಷ್ಕರಿಸಲಾಗುವುದು:</td>
<td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳ ಶೌಚಾಲಯ/ ಆವರಣದ ಸ್ವಚ್ಛತೆ/ ಸ್ವಚ್ಛತಾ ಸಾಮಾಗ್ರಿಗಳ ದರಗಳನ್ನು ಪರಿಷ್ಕರಿಸಲು ಕೋರಿ ಸಲ್ಲಿಸಿದ್ದ ಪ್ರಸ್ತಾವನೆಯು ಆರ್ಥಿಕ ಇಲಾಖೆಯಿಂದ ತಿರಸ್ಕೃತಗೊಂಡಿರುತ್ತದೆ.</td>
</tr>
<tr>
<td>ಈ)</td>
<td>ಹಳೆಯ ಕಟ್ಟಡದಲ್ಲಿರುವ ವಸತಿ ನಿಲಯಗಳ ಶೌಚಾಲಯಗಳಲ್ಲಿರುವ ಬೇಸಿನ್‌ಗಳು, ಪೈಪ್‌ಲೈನ್‌ಗಳು ಹಾಗೂ ಇತರೇ ಪ್ಲಂಬಿಂಗ್ ವ್ಯವಸ್ಥೆ ಒಡೆದು ಹೋದ ಸ್ಥಿತಿಯಲ್ಲಿದ್ದು, ಸ್ವಚ್ಛತೆಯ ನಿರ್ವಹಣೆಗೆ ಅಡ್ಡಿಯಾಗಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಕೈಗೊಂಡ ಕ್ರಮಗಳೇನು: ಯಾವಾಗ ಇಂತಹ ಸಮಸ್ಯೆಗಳನ್ನು ಬಗೆ ಹರಿಸಲಾಗುವುದು;</td>
<td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಶೌಚಾಲಯಗಳಲ್ಲಿರುವ ಬೇಸಿನ್‌ಗಳು, ಪೈಪ್‌ಲೈನ್‌ಗಳು ಹಾಗೂ ಇತರೇ ಪ್ಲಂಬಿಂಗ್ ವ್ಯವಸ್ಥೆ ಹಾಗೂ ಅಗತ್ಯವಿರುವ ಇನ್ನಿತರ ದುರಸ್ಥಿ ಕಾಮಗಾರಿಗಳನ್ನು ಆಯವ್ಯಯದಲ್ಲಿ ಜಿಲ್ಲಾವಲಯ ಲೆಕ್ಕಶೀರ್ಷಿಕೆ:2225-00-103-0-40- ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ವಹಣೆ ಕಾರ್ಯಕ್ರಮದಡಿ ಒದಗಿಸಿರುವ ಅನುದಾನದ ಲಭ್ಯತೆಯನುಸಾರ ಕೈಗೊಳ್ಳಲಾಗುತ್ತಿದೆ.</td>
</tr>
</table>

| | | |
|---|---|---|
| | | ಪ್ರಸಕ್ತ ಸಾಲಿನಲ್ಲಿ ರಾಜ್ಯವಲಯ ಲೆಕ್ಕಶೀರ್ಷಿಕೆ:4225-03-277-2-06, ಆಬ್ಜೆಕ್ಟೀವ್ ಕೋಡ್-132ರಡಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ಕಟ್ಟಡ ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳಲು ರೂ.25.00 ಕೋಟಿಗಳನ್ನು ಒದಗಿಸಿದ್ದು, ಮೊದಲ ಹಂತದಲ್ಲಿ ಕಲಬುರಗಿ ವಿಭಾಗದಲ್ಲಿ ವಿದ್ಯಾರ್ಥಿನಿಲಯ ಕಟ್ಟಡಗಳ ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳಲು ಆದೇಶಿಸಲಾಗಿದೆ. |
| ಉ) | ಹೊಸದಾಗಿ ನಿರ್ಮಾಣವಾಗುತ್ತಿರುವ ವಸತಿ ನಿಲಯಗಳ ಕಟ್ಟಡಗಳಲ್ಲೂ ವಿದ್ಯಾರ್ಥಿಗಳ ಸಂಖ್ಯೆಗಳಿಗೆ ಪೂರಕವಾಗಿ ಅಗತ್ಯ ಗಾತ್ರದ ಸಿಂಕ್‌ಪಿಟ್ (ಶೌಚಾಲಯ ಹೊಂಡ) ಗಳನ್ನು ನಿರ್ಮಿಸದೇ ಇರುವುದರಿಂದ ಪಿಟ್‌ಗಳು ಬೇಗ ಭರ್ತಿಯಾಗಿ ಸ್ವಚ್ಛತೆ ನಿರ್ವಹಣೆಯಲ್ಲಿ ತೊಂದರೆಯಾಗುತ್ತಿರುವುದನ್ನು ಯಾವಾಗ ಪರಿಹರಿಸಲಾಗುವುದು? | ಯು.ಜಿ.ಡಿ. ಸಂಪರ್ಕ ವ್ಯವಸ್ಥೆ ಇರುವ ಕಡೆ ವಿದ್ಯಾರ್ಥಿನಿಲಯಗಳ ಶೌಚಾಲಯಗಳಿಂದ ನೇರವಾಗಿ ಯು.ಜಿ.ಡಿ. ಗೆ ಸಂಪರ್ಕ ಕಲ್ಪಿಸಲಾಗಿರುತ್ತದೆ. ಹೊಸದಾಗಿ ನಿರ್ಮಾಣವಾಗುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಯು.ಜಿ.ಡಿ. ಸಂಪರ್ಕವಿಲ್ಲದಿದ್ದಲ್ಲಿ 100 ವಿದ್ಯಾರ್ಥಿಗಳ ಸಂಖ್ಯೆಗೆ ಹಾಗೂ ನಿರ್ಮಾಣ ಮಾಡುವ ಶೌಚಾಲಯಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯ ಗಾತ್ರದ ಸಿಂಕ್‌ಪಿಟ್ ಗಳನ್ನು ಹಾಗೂ Sewage Treatment Plant (S.T.P) ಗಳನ್ನು ಸಹ ನಿರ್ಮಿಸಿ, ವಿದ್ಯಾರ್ಥಿನಿಲಯಗಳಲ್ಲಿ ಸ್ವಚ್ಛತೆ ನಿರ್ವಹಣೆ ಮಾಡಲಾಗುತ್ತಿದೆ. |

ಸಂಖ್ಯೆ:ಹಿಂವಕ 1266 ಬಿಎಂಎಸ್ 2025

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ, ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು